

ಟಿಪ್ಪೂನ ಕತ್ತಿಗಳು ಹಾಗೂ ಧರಿಸುತ್ತಿದ್ದ ಧಿರಿಸು



ಟಿಪ್ಪೂನ ಗಡಿಯಾರ, ಟಿಪ್ಪೂನನ್ನು ಕೊಂದ ಸೈನಿಕರಿಗೆ ಇಂಗ್ಲೆಂಡಿನಲ್ಲಿ ನೀಡಿದ 'ಸೆರಿಂಗಪಟಮ್ ಪದಕ. ಆ ಪದಕದಲ್ಲಿ ಸಿಂಹ ಹುಲಿಯನ್ನು ಕೊಲ್ಲುತ್ತಿರುವ ಚಿತ್ರವಿದೆ.





ಟಿಪ್ಪೂನ ಯಂತ್ರ ಹುಲಿ

ವಿಕ್ಟೋರಿಯಾ ಮತ್ತು ಆಲ್ಬರ್ಟ್ ಮ್ಯೂಸಿಯಂಗೆ ಪ್ರವೇಶಿಸುತ್ತಿದ್ದಂತೆಯೇ ಎದುರಿಗೆ ಗಾಜಿನ ಪೆಟ್ಟಿಗೆಯಲ್ಲಿ ಟಿಪ್ಪೂ ಸುಲ್ತಾನನ ಪ್ರಖ್ಯಾತ ಯೂರೋಪಿಯನ್ನನ ಮೇಲೆ ದಾಳಿ ಮಾಡಿರುವ ಹುಲಿಯ 'ಯಂತ್ರ ಗೊಂಬೆ' ಸೆಳೆಯುವಂಥದು. ಅದರ ಮಿನಿಯೇಚರ್ ಕೃತಿ ಬೆಂಗಳೂರಿನ ಟಿಪ್ಪೂನ ಬೇಸಿಗೆ ಅರಮನೆಯಲ್ಲಿ ನೋಡಿದ್ದೆ. ಅಲ್ಲಿಯೇ ಟಿಪ್ಪೂ ಧರಿಸಿದ್ದ ವಸ್ತ್ರ, ಗಡಿಯಾರ, ಅವನ ಸಿಂಹಾಸನದಲ್ಲಿದ್ದ ಹುಲಿಯ ತಲೆಗಳು ಮುಂತಾದವು ಇದ್ದವು. ಬ್ರಿಟಿಷರಿಗೆ 'ವ್ಯಾಘ್ರಸ್ವಪ್ನ'ವಾಗಿದ್ದ ಟಿಪ್ಪೂನನ್ನು ಜೀವಂತ ಕಂಡಷ್ಟು ಸಂತೋಷವಾಯಿತು ನನಗೆ.

ಟಿಪ್ಪೂ ಸುಲ್ತಾನ್ ಮತ್ತು ಹುಲಿಯನ್ನು ನಾವು ಬೇರೆಬೇರೆಯಾಗಿ ನೋಡುವುದು ಸಾಧ್ಯವಿಲ್ಲ. ಟಿಪ್ಪೂ ಹುಲಿಯ ರೂಪಕವನ್ನು ಆತನ ರಾಜಮುದ್ರೆಯಲ್ಲಿ, ನಾಣ್ಯಗಳಲ್ಲಿ, ಗೋಡೆಗಳ ಮೇಲೆ, ಬಾವುಟಗಳಲ್ಲಿ ಬಳಸಿಕೊಂಡಿದ್ದ. ಅವನ ಅಡಿಕೆ ಡಬ್ಬಿಯ ಮೇಲೆಯೂ ಹುಲಿಯ ಚಿತ್ರವಿತ್ತು. ಹುಲಿಯ ಪಟ್ಟೆಗಳ ವಿನ್ಯಾಸದ ವಸ್ತ್ರ ಧರಿಸುತ್ತಿದ್ದ, ತನ್ನ ಸೈನಿಕರಿಗೂ ಅಂಥದೇ ವಸ್ತ್ರಗಳನ್ನು ಕೊಟ್ಟಿದ್ದ. ಅವನ ಕೆಲವು ಚಿಕ್ಕ ಫಿರಂಗಿಗಳನ್ನು ಸಹ ದಾಳಿ ಮಾಡಲು ಸಿದ್ಧವಿರುವ ಹುಲಿಗಳಂತೆ ವಿನ್ಯಾಸಗೊಳಿಸಲಾಗಿತ್ತು. ಅವನ ಸಿಂಹಾಸನಕ್ಕೆ ಹುಲಿಯ ಕಾಲುಗಳು ಹಾಗೂ ಹುಲಿಯ ತಲೆಗಳ ಆಕೃತಿಗಳಿದ್ದವು. ಯೂರೋಪಿಯನ್ನರ ಮೇಲೆ, ವಿಶೇಷವಾಗಿ ಬ್ರಿಟಿಷರ ಮೇಲೆ ಹುಲಿಗಳು ಮತ್ತು ಆನೆಗಳು ದಾಳಿ ಮಾಡುತ್ತಿರುವ ಚಿತ್ರಗಳನ್ನು ಶ್ರೀರಂಗಪಟ್ಟಣದ ನಗರದ ಗೋಡೆಗಳ ಮೇಲೆಲ್ಲಾ ಬರೆಸಿದ್ದನಂತೆ.

ಟಿಪ್ಪೂ ಶತ್ರುಗಳಿಗೆ ತನ್ನ ಶಕ್ತಿಯನ್ನು ಪ್ರದರ್ಶಿಸಲು ಒಂದು ಪ್ರಬಲ ಮತ್ತು ಪರಿಣಾಮಕಾರಿ ಸಂಕೇತವನ್ನು ಬಳಸಿಕೊಂಡಿದ್ದ. ಬ್ರಿಟಿಷರಿಗೆ ಆ 'ವ್ಯಾಘ್ರಸ್ವಪ್ನ' ಎಷ್ಟು ನಿದ್ರೆ ಕೆಡಿಸಿತ್ತೆಂದರೆ ಅವರು ಆ ಸಿಟ್ಟನ್ನು ಕಾಡಿನಲ್ಲಿನ ನಿಜವಾದ ಹುಲಿಗಳನ್ನು ಕೊಂದು ಅವುಗಳ ಮೇಲೆ ಕಾಲನ್ನಿಟ್ಟು ಫೋಟೊ ತೆಗೆಸಿಕೊಂಡು ಗರ್ವದಿಂದ ಬೀಗುತ್ತಿದ್ದರು. ಟಿಪ್ಪೂ ಹುಲಿಯೊಂದಿಗೆ ಸೆಣಸುತ್ತಿರುವ ಹಲವಾರು ಚಿತ್ರಗಳು ಟಿಪ್ಪೂನ ಕಾಲದ ನಂತರ